# ಕನ್ನಡ ಪೋಸ್ಟ್

ಸಂಪಾದಕ : ಮಂಜು ಬನವಾಸೆ

KANNADA POST

ಇದು ಸುದ್ದಿ ವಿಳಾಸ

ಕನ್ನಡ ದಿನಪತ್ರಿಕೆ

ಹಾಸನ E-mail : kannadapostnews@gmail.com / ಕನ್ನಡ post Price: ₹1

Vol.No. 1 | Issue : 271 | Pages .02 | Date : 16.09.2025 TUESDAY RNI NO.KARKAN/2024/89601 Kannada Daily

ಸಂಪುಟ : 01 – ಸಂಚಿಕೆ : 271 – ಪುಟಗಳು : 02 16.09.2025 ಮಂಗಳವಾರ Ph : 8762954248 ದರ : ₹1


# ರಸ್ತೆ ಅವಘಡ ನಿಯಂತ್ರಣಕ್ಕೆ ಕಟ್ಟುನಿಟ್ಟಿನ ಸೂಚನೆ

## ಪಿಯು ಮಕ್ಕಳು ಬೈಕ್ ಓಡಿಸಿದರೆ ಪ್ರಾಂಶುಪಾಲರಿಗೆ ನೋಟಿಸ್ । ಜಿಲ್ಲಾಧಿಕಾರಿ ಎಚ್ಚರಿಕೆ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಹಾಸನ: ತಾಲ್ಲೂಕಿನ ಮೊಸಳೆಹೊಸಹಳ್ಳಿಯಲ್ಲಿ ಕ್ಯಾಂಟರ್ ಡಿಕ್ಕಿಯಾಗಿ ಹತ್ತು ಜನರು ಮೃತಪಟ್ಟ ಬಳಿಕ ಸಮಸ್ಯೆಯನ್ನು ಗಂಭೀರವಾಗಿ ಪರಿಗಣಿಸಿರುವ ಜಿಲ್ಲಾಡಳಿತ ರಸ್ತೆ ನಿಯಮ ಪಾಲನೆಗಾಗಿ ಕಟ್ಟುನಿಟ್ಟಿನ ಕ್ರಮಕ್ಕೆ ಮುಂದಾಗಿದೆ.

ಜಿಲ್ಲಾಧಿಕಾರಿ ಕೆ.ಎಸ್. ಲತಾಕುಮಾರಿ ಅವರು ಸೋಮವಾರ ಜಿಲ್ಲಾಧಿಕಾರಿ ಕಚೇರಿಯಲ್ಲಿ ರಸ್ತೆ ಸುರಕ್ಷತಾ ಸಮಿತಿ ಸಭೆ ನಡೆಸಿದ್ದು ಅಪಘಾತ ವಲಯಗಳನ್ನು ಗುರುತಿಸಿ ಸೂಚನಾ ಫಲಕ ಅಳವಡಿಸಬೇಕೆಂದು ಕಟ್ಟುನಿಟ್ಟಿನ ಸೂಚನೆ ನೀಡಿದ್ದಾರೆ.

ಅಪಘಾತಗಳಿಂದ ಸಾವು–ನೋವು ಸಂಭವಿಸುತ್ತಿದೆ. ಅದರ ಬಗ್ಗೆ ಯಾರಿಗೂ ಅರಿವಿಲ್ಲ. ಉದಾಸೀನದಿಂದ ವಾಹನ ಚಲಾಯಿಸಿ ಅವಘಡಗಳು ಸಂಭವಿಸುವುದರಿಂದ ಅಮಾಯಕ ಕುಟುಂಬಗಳು ನೋವು ಅನುಭವಿಸುವಂತಾಗಿದೆ ಎಂದರು.

ರಸ್ತೆ ಒತ್ತುವರಿ ತೆರವು, ಮುಖ್ಯ ರಸ್ತೆಗಳಲ್ಲಿ ಪಾದಾಚಾರಿಗಳ ಸಂಚಾರಕ್ಕೆ ಮೀಸಲಿರುವ ಸ್ಥಳದಲ್ಲಿ ಗೂಡಂಗಡಿಗೆ ಅವಕಾಶ ನೀಡಬಾರದು. ಈ ಬಗ್ಗೆ ಡಂಗೂರ ಸಾರಿಸಿ, ನೋಟಿಸ್ ನೀಡಿ, ಪತ್ರಿಕಾ ಪ್ರಕಟಣೆ ಮೂಲಕ ಜನರಲ್ಲಿ ಜಾಗೃತಿ ಮೂಡಿಸಬೇಕು ಎಂದರು.

ದ್ವಿಚಕ್ರ ವಾಹನ ಚಾಲಾಯಿಸುವವರು ಹೆಲ್ಮೆಟ್ ಕಡ್ಡಾಯವಾಗಿ ಧರಿಸಬೇಕು. ಯುವ ಜನತೆ ಲಘುವಾಗಿ ಪರಿಗಣಿಸಬಾರದು.

ಅದರಿಂದ ಆಗುವ ಅವಘಡಗಳನ್ನು ತಡೆಯಲು ಅಧಿಕಾರಿಗಳು ಕ್ರಮವಹಿಸಬೇಕು. 18 ವರ್ಷದೊಳಗಿನ ಮಕ್ಕಳು ದ್ವಿಚಕ್ರ ವಾಹನ ಚಾಲನೆ ಮಾಡುವಂತಿಲ್ಲ. ಈ ನಿಟ್ಟಿನಲ್ಲಿ ಯಾವುದೇ ಪದವಿ ಪೂರ್ವ ಕಾಲೇಜುಗಳಿಗೆ ಮಕ್ಕಳು ದ್ವಿಚಕ್ರ ವಾಹನಗಳಲ್ಲಿ ಬರುತ್ತಿದ್ದರೆ ಅಂತಹ ಕಾಲೇಜುಗಳ ಪ್ರಾಂಶುಪಾಲರಿಗೆ ನೋಟಿಸ್ ನೀಡುವಂತೆ ತಿಳಿಸಿದರು.

ಶಾಲಾ ಕಾಲೇಜುಗಳಲ್ಲಿ ಮಾಹಿತಿಗಾಗಿ ರಸ್ತೆ ಸುರಕ್ಷತಾ ಚಿಹ್ನೆಗಳ ಫಲಕ ಅಳವಡಿಸಲು ಸೂಚಿಸಿದರಲ್ಲದೆ, ಸಂಚಾರ ನಿಯಮಗಳ ಕುರಿತು ಅರಿವು ಕಾರ್ಯಕ್ರಮ ಹಮ್ಮಿಕೊಳ್ಳಬೇಕೆಂದರು.ಯಾವುದೇ ಅವಘಡ ಸಂಭವಿಸಿದ ನಂತರ ಕ್ರಮ ವಹಿಸುವುದಲ್ಲ. ಮುನ್ನೆಚ್ಚರಿಕೆ ವಹಿಸುವುದು ಎಲ್ಲರ ಜವಾಬ್ದಾರಿ. ಈ ನಿಟ್ಟಿನಲ್ಲಿ ತಾಲ್ಲೂಕು ಮಟ್ಟದಲ್ಲಿ ಸಭೆ ನಡೆಸಿ ಸಂಚಾರ ನಿಯಮ ಪಾಲನೆ ಮತ್ತುರಸ್ತೆ ಅಪಘಾತಗಳ ತಡೆಗಟ್ಟುವ ನಿಟ್ಟಿನಲ್ಲಿ ತಹಶೀಲ್ದಾರ್‌ಗಳು ಮುತುವರ್ಜಿ ವಹಿಸಬೇಕೆಂದು ಹೇಳಿದರು.

ಟೋಲ್ ಪ್ಲಾಜ್ಹಾಗಳಲ್ಲಿ ಬ್ರೆತ್ ಅನಲೈಜರ್ ಮಿಷಿನ್ ಇಡಬೇಕು. ರಾಷ್ಟ್ರೀಯ ಹೆದ್ದಾರಿ–75 ರಲ್ಲಿ ಕಡ್ಡಾಯವಾಗಿ ಬಳಕೆಗೆ 2 ಅಂಬುಲೆನ್ಸ್ ಲಭ್ಯವಿರಬೇಕು. ರಸ್ತೆ ಸುರಕ್ಷತೆ ಬಗ್ಗೆ ಜಾಗೃತಿ ಮೂಡಿಸುವಂತೆಯೂ ಸಹರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದ ಅಧಿಕಾರಿಗಳಿಗೆ ಸೂಚಿಸಿದರು.ಟ್ರಕ್ ಟರ್ಮಿನಲ್ ನಿರ್ಮಾಣಕ್ಕೆ ನಗರ ಹೊರವಲಯದಲ್ಲಿ ಜಾಗ ಗುರುತಿ ಸುವಂತೆ ಸೂಚಿಸಿದರಲ್ಲದೆ, ಶಾಲಾ ವಾಹನ ಚಾಲಕರು ಸಮವಸ್ತ್ರ ಕಡ್ಡಾಯವಾಗಿ ಧರಿಸಬೇಕು.

ವಾಹನ ಪರವಾನಗಿ ಹೊಂದಿರಬೇಕು. ಸಂಚಾರಿ ನಿಯಮಗಳನ್ನು ಕಡ್ಡಾಯವಾಗಿ ಪಾಲಿಸಬೇಕು ಎಂದರು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಮೊಹಮದ್ ಸುಜೀತಾ ಅವರು ಮಾತನಾಡಿ, ರಾತ್ರಿ 9.30ರ ನಂತರ ಬೀದಿ ದೀಪಗಳು ಇಲ್ಲದಿರುವುದು, ಅವೈಜ್ಞಾನಿಕವಾಗಿ ರಸ್ತೆಗಳಿಗೆ ಹಂಪ್ಸ್ ಅಳವಡಿಸುವುದು ಅಪಘಾತ ಸಂಭವಿಸಲು ಕಾರಣವಾಗುತ್ತಿದೆ. ಲೋಪ ಸಂಭವಿಸದಂತೆ ಮುನ್ನೆಚ್ಚರಿಕೆ ವಹಿಸದಿದ್ದರೆ ವ್ಯಾಪ್ತಿಯ ಸಂಬಂಧಪಟ್ಟ ಅಧಿಕಾರಿಯ ಮೇಲೆ ಎಫ್ಐಆರ್ ದಾಖಲಿಸಲಾಗುತ್ತದೆಂದು ಎಚ್ಚರಿಕೆ ನೀಡಿದರು.

ಜಿ.ಪಂ ಸಿಇಒ ಬಿ.ಆರ್. ಪೂರ್ಣಿಮಾ, ಅಪರ ಜಿಲ್ಲಾಧಿಕಾರಿ ಮಂಜುನಾಥ್, ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ವೆಂಕಟೇಶ್ ನಾಯ್ಡು, ಲೋಕೋಪಯೋಗಿ ಇಲಾಖೆ ಕಾರ್ಯ ಪಾಲಕ ಅಭಿಯಂತರರಾದ ಗಿರೀಶ್, ಹಿಮ್ಸ್ ನಿರ್ದೇಶಕ ಡಾ. ರಾಜಣ್ಣ, ಪ್ರಾದೇಶಿಕ ಸಾರಿಗೆ ಅಧಿಕಾರಿ ಪ್ರಕಾಶ್, ಮಹಾನಗರ ಪಾಲಿಕೆ ಆಯುಕ್ತ ಆರ್. ಕೃಷ್ಣಮೂರ್ತಿ, ಶಾಲಾ ಶಿಕ್ಷಣ ಇಲಾಖೆ ಉಪನಿರ್ದೇಶಕ ಬಲರಾಂ ಮತ್ತಿತರರಿದ್ದರು.




### ಸರ್ಕಾರ ತನಿಖೆ ನಡೆಸಲಿ: ಮಾಜಿ ಸಚಿವ ರೇವಣ್ಣ



ಮೊಸಳೆಹೊಸಳ್ಳಿಯಲ್ಲಿ ಸಂಭವಿಸಿದ ಕ್ಯಾಂಟರ್ ಅವಘಡಕ್ಕೆ ಪೊಲೀಸ್ ಇಲಾಖೆಯ ವೈಫಲ್ಯ ಕಾರಣವಾಗಿದ್ದು ಸರ್ಕಾರ ತಂಡ ರಚಿಸಿ ತನಿಖೆ ನಡೆಸಬೇಕು ಎಂದು ಮಾಜಿ ಸಚಿವ ಹೆಚ್.ಡಿ. ರೇವಣ್ಣ ಆಗ್ರಹಿಸಿದರು.

ಸುದ್ದಿಗೋಷ್ಠಿಯಲ್ಲಿ ಸೋಮ ವಾರ ಮಾತನಾಡಿ, ಘಟನಾ ಸ್ಥಳಕ್ಕೆ ಭೇಟಿ ನೀಡಿದ್ದ ಜಿಲ್ಲಾ ಉಸ್ತುವಾರಿ ಸಚಿವ ಕೃಷ್ಣಬೈರೇಗೌಡ ಅವರು ಪ್ರಕರಣದ ಸಮಗ್ರ ತನಿಖೆ ನಡೆಸಿ ತಪ್ಪಿತಸ್ಥರ ವಿರುದ್ಧ ಕ್ರಮ ಜರುಗಿಸುವುದಾಗಿ ಹೇಳಿದ್ದಾರೆ. ಪೊಲೀಸ್ ಇಲಾಖೆ ವೈಫಲ್ಯದಿಂದಲೇ ಅನಾಹುತ ಸಂಭವಿಸಿದೆ. ಪೊಲೀಸ್ ಇಲಾಖೆ ಸರ್ಕಾರದ ಅಧೀನದಲ್ಲಿರುವುದರಿಂದ ಇದು ಸರ್ಕಾರದ ವೈಫಲ್ಯ. ಸರ್ಕಾರವೇ ಒಂದು ತಂಡ ಕಳುಹಿಸಿ ತನಿಖೆ ನಡೆಸಲಿ ಎಂದು ಆಗ್ರಹಿಸಿದರು.

ಗಣೇಶ ಮೂರ್ತಿ ವಿಸರ್ಜನಾ ಮೆರವಣಿಗೆ ಬರುವ ವೇಳೆ 500 ಮೀಟರ್ ದೂರದಲ್ಲಿ ಬ್ಯಾರಿಕೇಡ್ ಹಾಕಿ ಇಬ್ಬರು ಕಾನ್ಸಟೇಬಲ್‌ಗಳನ್ನು ನಿಯೋಜಿಸಿದ್ದರೆ ಕ್ಯಾಂಟರ್ ಚಾಲಕ ಎಷ್ಟೇ ವೇಗವಾಗಿ ಬಂದರೂ ಬ್ಯಾರಿಕೇಡ್‌ಗೆ ಡಿಕ್ಕಿ ಹೊಡೆದು ಅಲ್ಲೇ ನಿಲ್ಲಬಹುದಿತ್ತು. ಆದರೆ ಆ ವಿಚಾರವಾಗಿ ಪೊಲೀಸರು ಯೋಚನೆಯನ್ನೇ ಮಾಡಿಲ್ಲ. ಅಥವಾ ಮೆರವಣಿಗೆ ರಸ್ತೆ ದಾಟುವ ತನಕ ಸಂಚಾರ ಬಂದ್ ಮಾಡಬಹುದಿತ್ತು ಎಂದರು.ಮೊಸಳೆಹೊಸಹಳ್ಳಿ ನಾಲ್ಕು ಸಾವಿರ ಜನಸಂಖ್ಯೆ ಇರುವ ಗ್ರಾಮ. ಗಣೇಶ ವಿಸರ್ಜನೆಗೆ ಸುತ್ತಲಿನ ಹಳ್ಳಿಗಳ ಜನರೂ ಬರುತ್ತಾರೆ. ಸರ್ಕಾರಿ ಎಂಜಿನಿಯರಿಂಗ್ ಕಾಲೇಜು ಇರುವುದರಿಂದ ಹಾಸ್ಟೆಲ್ ವಿದ್ಯಾರ್ಥಿಗಳು ಬರುತ್ತಾರೆಂಬ ತಿಳಿವಳಿಕೆ ಪೊಲೀಸರಿಗೆ ಇರಬೇಕಿತ್ತು. ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಮೊದಲೇ ಸಭೆ ಮಾಡಿ ಸಿಬ್ಬಂದಿಗೆ ನಿಯಮ ಹೇಳಬೇಕಿತ್ತು ಎಂದು ಅಭಿಪ್ರಾಯಪಟ್ಟರು.

### ಮಾತು ಕೊಟ್ಟು ಮರೆತ ಸರ್ಕಾರ

ಮೊಸಳೆಹೊಸಹಳ್ಳಿ ದುರಂತದಲ್ಲಿ ಗಂಭೀರ ಗಾಯಾಳುಗಳ ಚಿಕಿತ್ಸಾ ವೆಚ್ಚವನ್ನು ಭರಿಸುವುದಾಗಿ ಮಾತುಕೊಟ್ಟಿದ್ದ ಸರ್ಕಾರ ಮರೆತಿದೆ.ಅಪಘಾತದಲ್ಲಿ ತೀವ್ರವಾಗಿ ಗಾಯಗೊಂಡ ಮೊಸಳೆಹೊಸ್ಳಳ್ಳಿಯ ಆದರ್ಶ್ (25) ಹಾಗೂ ಇಂಜಿನಿಯರಿಂಗ್ ವಿದ್ಯಾರ್ಥಿ ಋತ್ವಿಕ್ (21) ಹಾಸನದ ಖಾಸಗಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ. ಸರ್ಕಾರ ಉಚಿತ ಚಿಕಿತ್ಸೆ ನೀಡುವುದಾಗಿ ಘೋಷಿಸಿದ್ದರೂ ಇದುವರೆಗೆ ಯಾವುದೇ ನೆರವು ಸಿಗದ ಕಾರಣ ಪೋಷಕರು ಸಂಕಷ್ಟದಲ್ಲಿದ್ದಾರೆ. ಈಗಾಗಲೇ ಲಕ್ಷಾಂತರ ರೂಪಾಯಿ ಬಿಲ್ ಆಗಿದ್ದು, ಹೆಚ್ಚಿನ ಹಣವಿಲ್ಲದೆ ಚಿಕಿತ್ಸೆಮುಂದುವರಿಸಲು ತೊಂದರೆ ಎದುರಿಸುತ್ತಿದ್ದಾರೆ.

ಕನಿಷ್ಠ ಅರ್ಧದಷ್ಟು ಬಿಲ್ ಆದರೂ ಕಟ್ಟಬೇಕೆಂದು ಆಸ್ಪತ್ರೆ ಸಿಬ್ಬಂದಿ ಒತ್ತಾಯಿಸುತ್ತಿದ್ದು, ಬೇರೆಡೆ ಕರೆದೊಯ್ಯಲಾಗದ ಸ್ಥಿತಿಯಲ್ಲಿ ಪೋಷಕರು ಗೊಂದಲದಲ್ಲಿದ್ದಾರೆ. ಸರ್ಕಾರದ ನಿರ್ಲಕ್ಷ್ಯದಿಂದ ಪೋಷಕರು ಆಕ್ರೋಶ ವ್ಯಕ್ತಪಡಿಸಿದ್ದು, ಗ್ರಾಮಸ್ಥರೂ ಈ ಕುರಿತು ಅಸಮಾಧಾನ ವ್ಯಕ್ತಪಡಿಸಿದ್ದಾರೆ.

# ನಿಶ್ಚಲಾನಂದನಾಥ ಸ್ವಾಮೀಜಿ ಭೇಟಿ

ಟ್ರಕ್ ಹರಿದು ಹತ್ತು ಮಂದಿ ಸಾವನ್ನಪ್ಪಿರುವ ಹಿನ್ನಲೆ ಮೃತರ ಮನೆಗಳಿಗೆ ಕೆಂಗೇರಿಯ ವಿಶ್ವ ಒಕ್ಕಲಿಗರ ಮಹಾಸಂಸ್ಥಾನ ಮಠದ ಪೀಠಾಧ್ಯಕ್ಷ ಶ್ರೀ ನಿಶ್ಚಲಾನಂದನಾಥ ಸ್ವಾಮೀಜಿ ಭೇಟಿ ನೀಡಿ ಸಾಂತ್ವನ ಹೇಳಿದರು. ಕಬ್ಬಿನಹಳ್ಳಿ ಗ್ರಾಮದ ಪ್ರವೀಣ್, ಕುಮಾರ್ ಮನೆಗಳಿಗೆ ಶ್ರೀಗಳು ಭೇಟಿ ನೀಡಿ ಮೃತರ ಕುಟುಂಬಸ್ಥರಿಗೆ ಸಾಂತ್ವನ ಹೇಳಿದರು. ಇದೇ ವೇಳೆ ರಾಜ್ಯ ಹಾಗೂ ಕೇಂದ್ರ ಸರ್ಕಾರಗಳು ಹೆಚ್ಚಿನ ಪರಿಹಾರ ನೀಡುವಂತೆ ಒತ್ತಾಯಿಸಿದರು.

# ಕ್ಷುಲ್ಲಕ ಕಾರಣಕ್ಕೆ ವಿದ್ಯಾರ್ಥಿಗಳ ಹೊಡೆದಾಟ



ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಹಾಸನ: ಜಿಲ್ಲಾ ಕ್ರೀಡಾಂಗಣದಲ್ಲಿ ಸೋಮವಾರ ನಡೆದ ತಾಲ್ಲೂಕು ಮಟ್ಟದ ಪಿಯು ಕಾಲೇಜುಗಳ ಕ್ರೀಡಾಕೂಟದಲ್ಲಿ ವಿದ್ಯಾರ್ಥಿಗಳ ನಡುವೆ ಹೊಡೆದಾಟ ನಡೆದಿದೆ.

ಖೋ ಖೋ ಪಂದ್ಯಾವಳಿ ಮುಗಿದ ನಂತರ ಕ್ಷುಲ್ಲಕ ಕಾರಣಕ್ಕೆ ವಿದ್ಯಾರ್ಥಿಗಳು ಪರಸ್ಪರ ತಳ್ಳಾಟಬಡಿದಾಟ ನಡೆಸಿದ ಪರಿಣಾಮ ಕ್ರೀಡಾಂಗಣದಲ್ಲಿ ಉದ್ವಿಗ್ನ ವಾತಾವರಣ ನಿರ್ಮಾಣವಾಯಿತು.

ಘಟನೆಯ ಹಿನ್ನೆಲೆಯಲ್ಲಿ ಕ್ರೀಡಾಂಗಣದ ವ್ಯವಸ್ಥೆ ಕುರಿತು ಸಾರ್ವಜನಿಕರು ಆಕ್ರೋಶ ವ್ಯಕ್ತಪಡಿಸಿದ್ದಾರೆ. ಪ್ರತಿದಿನ ಇಲ್ಲಿ ಗಲಾಟೆಗಳಾಗುತ್ತಿವೆ. ಪುಂಡರು ಹೆಚ್ಚಿನ ಸಂಖ್ಯೆಯಲ್ಲಿ ಕ್ರೀಡಾಂಗಣಕ್ಕೆ ಬರುತ್ತಿದ್ದಾರೆ. ವಯೋವೃದ್ಧರು ಬೆಳಗಿನ ವೇಳೆ ವಾಕ್ ಮಾಡಲು ಬರುವಾಗ ತೊಂದರೆ ಅನುಭವಿಸುತ್ತಿದ್ದಾರೆ. ಕೆಲವರು ವೇಗವಾಗಿ ಬೈಕ್ ಚಲಾಯಿಸಿಕೊಂಡು ಕ್ರೀಡಾಂಗಣಕ್ಕೆ ನುಗ್ಗುತ್ತಿದ್ದಾರೆಂದು ಸ್ಥಳೀಯರು ಕಳವಳ ವ್ಯಕ್ತಪಡಿಸಿದರು.

ಆಯೋಜಕರ ನಿರ್ಲಕ್ಷ್ಯ ಹಾಗು ಪೊಲೀಸರನ್ನು ನಿಯೋಜಿಸದಿರುವುದೇ ಗಲಾಟೆಗೆ ಪ್ರಮುಖ ಕಾರಣ. ಈ ರೀತಿ ಗಲಾಟೆಯಾಗದಂತೆ ಮುನ್ನೆಚ್ಚರಿಕೆ ವಹಿಸಬೇಕು. ಕ್ರೀಡಾಕೂಟ ನಡೆಯುವ ಸಂದರ್ಭದಲ್ಲಾದರೂ ಗಸ್ತು ಪೊಲೀಸರ ನಿಯೋಜಿಸಬೇಕೆಂದು ಒತ್ತಾಯಿಸಿದ್ದಾರೆ.

# ಪ್ರಜಾಪ್ರಭುತ್ವ ಯಶಸ್ಸಿಗೆ ಯುವಕರ ಪಾತ್ರ ಮುಖ್ಯ: ಸಿಮೆಂಟ್ ಮಂಜು



ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಸಕಲೇಶಪುರ: ದೇಶದ ಪ್ರಜಾಪ್ರಭುತ್ವದ ಯಶಸ್ಸಿಗೆ ಯುವ ಜನತೆಯ ಪಾತ್ರ ಮುಖ್ಯವಾಗಿದೆ ಎಂದು ಶಾಸಕ ಸಿಮೆಂಟ್ ಮಂಜು ಹೇಳಿದರು.

ಪ್ರಜಾಪ್ರಭುತ್ವ ದಿನವಾದ ಸೋಮವಾರ ನಗರದ ಮಿನಿ ವಿಧಾನಸೌಧ ಎದುರಿರುವ ಅಂಬೇಡ್ಕರ್ ಪ್ರತಿಮೆಗೆ ಮಾಲಾರ್ಪಣೆ ಮಾಡಿ ಮಾತನಾಡಿ, ಭಾರತವು ವಿಶ್ವದಲ್ಲಿಯೇ ಬೃಹತ್ ಪ್ರಜಾಪ್ರಭುತ್ವ ರಾಷ್ಟ್ರವಾಗಿದ್ದು, ದೇಶದ ಮತದಾನದ ವ್ಯವಸ್ಥೆ ಇಡೀ ವಿಶ್ವಕ್ಕೆ ಮಾದರಿಯಾಗಿದೆ ಎಂದರು.

ಸ್ವಾತಂತ್ರ್ಯ, ಸಮಾನತೆ, ನ್ಯಾಯ, ಭ್ರಾತೃತ್ವ ಪ್ರಜಾಪ್ರಭುತ್ವದ ಮೂಲ ಆಧಾರ ಅಂಶಗಳಾಗಿವೆ. ಮುಕ್ತ ಮತ್ತು ನ್ಯಾಯಸಮತ ಚುನಾವಣೆ ನಡೆಸಲು ಎಲ್ಲರ ಸಹಕಾರ ಮುಖ್ಯವಾಗಿದ್ದು, ಭಾರತ ಪ್ರಜಾಪ್ರಭುತ್ವ ರಾಷ್ಟ್ರವಾಗಿದ್ದು, ಮತದಾನ ನಮೆಲ್ಲರ ಜನ್ಮಸಿದ್ಧ ಹಕ್ಕಾಗಿದೆ. ನೂರಕ್ಕೆ ನೂರರಷ್ಟು ಮತದಾನ ಮಾಡುವ ಮೂಲಕ ನಮ ಸಂವಿಧಾನದ ಮಹತ್ವ ಉಳಿಸಿಕೊಳ್ಳಬೇಕೆಂದು ಕರೆ ನೀಡಿದರು.

ಉಪವಿಭಾಗಾಧಿಕಾರಿ ರಾಜೇಶ್, ತಹಶೀಲ್ದಾರ್ ಸುಪ್ರಿತಾ, ತಾ.ಪಂ ಮುಖ್ಯಾಧಿಕಾರಿ ಗಂಗಾಧರನ್ ಇತರರಿದ್ದರು.

### 45 ಸಾವಿರ ರೂ. ಬೆಲೆಯ ಗಾಂಜಾ ಸೊಪ್ಪು ವಶ

ಅರಸೀಕೆರೆ: ಅಕ್ರಮವಾಗಿ ಗಾಂಜಾ ಸೊಪ್ಪು ಮಾರಾಟ ಮಾಡುತ್ತಿದ್ದ ಇಬ್ಬರನ್ನು ಬಂಧಿಸಿರುವ ನಗರ ಠಾಣೆ ಪೊಲೀಸರು 45 ಸಾವಿರ ರೂ. ಮೌಲ್ಯದ 225 ಗ್ರಾಂ ಗಾಂಜಾ ಸೊಪ್ಪು ವಶಪಡಿಸಿಕೊಳ್ಳಲಾಗಿದೆ.

ನಗರದ ಅವೇಜ್ ಖಾನ್, ಸುಹೀಲ್ ಬಂಧಿತರು. ಭಾನುವಾರ ಮಧ್ಯಾಹ್ನ ಎಪಿಎಂಸಿ ಗೇಟ್ ಹತ್ತಿರ ಗಾಂಜಾ ಸೊಪ್ಪು ಮಾರಾಟ ಮಾಡುತ್ತಿದ್ದಾರೆಂಬ ಖಚಿತ ಮಾಹಿತಿ ಮೇರೆಗೆ ಪೊಲೀಸರು ದಾಳಿ ನಡೆಸಿದ್ದರು. ನಗರ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ಹಾಸನದಲ್ಲಿ ನಾಳೆ ವಿಶ್ವಕರ್ಮ ಜಯಂತಿ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಹಾಸನ: ನಗರದ ಹಾಸನಾಂಬ ಕಲಾಕ್ಷೇತ್ರದಲ್ಲಿ ಸೆ.17ರ ಬುಧವಾರ ಜಿಲ್ಲಾ ವಿಶ್ವಕರ್ಮ ಸಮಾಜ ಹಾಗು ಜಿಲ್ಲಾಡಳಿತ ವತಿಯಿಂದ ವಿಶ್ವಕರ್ಮ ಜಯಂತಿ ಏರ್ಪಡಿಸಲಾಗಿದೆ ಎಂದು ಜಿಲ್ಲಾ ವಿಶ್ವಕರ್ಮ ಸಮಾಜ ಅಧ್ಯಕ್ಷ ಹೆಚ್.ವಿ. ಹರೀಶ್ ಹೇಳಿದರು.




ಸುದ್ದಿಗೋಷ್ಠಿಯಲ್ಲಿ ಸೋಮವಾರ ಮಾತನಾಡಿ, ಅಂದು ಬೆಳಿಗ್ಗೆ 8 ಗಂಟೆಗೆ ಅರೆಮಾದನಹಳ್ಳಿ ಮಠದ ಶ್ರೀ ಶಿವಸುಜ್ಞಾನ ತೀರ್ಥ ಸ್ವಾಮೀಜಿ ಅವರ ದಿವ್ಯ ಸಾನ್ನಿಧ್ಯದಲ್ಲಿ ಶ್ರೀ ಕ್ಷೇತ್ರ ಕಾಳಿಕಾಂಬ ಕಮಠೇಶ್ವರ ದೇವಾಲಯದಲ್ಲಿ ವಿಶ್ವಕರ್ಮ ಹೋಮ. ಬೆಳಿಗ್ಗೆ 9.30ಕ್ಕೆ ಜಿಲ್ಲಾಧಿಕಾರಿ ಕಚೇರಿ ಆವರಣದಲ್ಲಿ ವಿಶ್ವಕರ್ಮರ ಭಾವಚಿತ್ರಕ್ಕೆ ಪುಷ್ಪಾರ್ಚನೆ, ನಂತರ ವಿಶ್ವಕರ್ಮ ವೃತ್ತದಿಂದ ಕಲಾಕ್ಷೇತ್ರದ ವರೆಗೆ ಮೆರವಣಿಗೆ, ಬೆಳಿಗ್ಗೆ 11.30ಕ್ಕೆ ವೇದಿಕೆ ಕಾರ್ಯಕ್ರಮ ನಡೆಯಲಿದೆ ಎಂದರು.


ಪುಷ್ಪಗಿರಿ ಮಠದ ಶ್ರೀ ಸೋಮಶೇಖರ ಸ್ವಾಮೀಜಿ ಭಾಗವಹಿಸುವರು. ವಿಶ್ವಕರ್ಮ ಮಕ್ಕಳಿಗೆ ಪ್ರತಿಭಾ ಪುರಸ್ಕಾರ, ಸಾಂಸ್ಕೃತಿಕ ಕಾರ್ಯಕ್ರಮ ನಡೆಯಲಿವೆ. ಮಧ್ಯಾಹ್ನ 2 ಗಂಟೆಗೆ ಪ್ರೊ. ಕೃಷ್ಣೇಗೌಡ ಅವರಿಂದ ನಗೆಹಬ್ಬ ಕಾರ್ಯಕ್ರಮ ಏರ್ಪಡಿಸಲಾಗಿದೆ ಎಂದರು.

ವಿಶ್ವಕರ್ಮ ಸಮಾಜ ಜಿಲ್ಲಾ ಉಪಾಧ್ಯಕ್ಷ ಎ.ಸಿ. ನಾರಾಯಣ್, ಪ್ರಧಾನ ಕಾರ್ಯದರ್ಶಿ ಕೆ. ರಾಘವೇಂದ್ರ ಕುಮಾರ್, ಉಪಾಧ್ಯಕ್ಷ ಕೆ.ವಿ. ಯೋಗೀಶ್, ತಾಲ್ಲೂಕು ಉಪಾಧ್ಯಕ್ಷ ಬ್ಯಾಟರಂಗಚಾರ್, ಖಜಾಂಚಿ ಕೆ.ಎಸ್. ಜಗದೀಶ್ ಇದ್ದರು.



ಹಾಸನ: ಬೆಂಗಳೂರಿನ ವರ್ತೂರಿನಲ್ಲಿ ಸೈಖಾಯ್ ಬೆಟ್ಟವೋ ಗೌಜು ರೆಯ್ಯೂ ಕರಾಟೆ ಡುಂ ಸ್ಪೋರ್ಟ್ಸ್ ಫೌಂಡೇಶನ್ ವತಿಯಿಂದ ಸೆ. 14ರಂದು ನಡೆದ ಪ್ರಥಮ ರಾಷ್ಟ್ರೀಯ ಕರಾಟೆ ಚಾಂಪಿಯನ್‌ಷಿಪ್ ಸ್ಪರ್ಧೆಯಲ್ಲಿ ಹಾಸನ ಅಮೆಚೂರ್ ಬಾಡಿ ಬಿಲ್ಡರ್ ಸಂಸ್ಥೆಯ ಕರಾಟೆ ಪಟುಗಳು ವಿವಿಧ ಬೆಲ್ಟ್ ಮತ್ತು ವಯೋಮಾನದ ವಿಭಾಗಗಳಲ್ಲಿ ಸಮಗ್ರ ಪ್ರಶಸ್ತಿ ಪಡೆದಿದ್ದಾರೆ. ಮಹದೇವ ಅವರು ತರಬೇತಿ ನೀಡಿದ್ದರು. ಸಂಸ್ಥೆಯ ಅಧ್ಯಕ್ಷ ಶರತ್ಚಂದ್ರ, ಸದಸ್ಯರು ಹಾಗು ಪೋಷಕರು ವಿಜೇತ ವಿದ್ಯಾರ್ಥಿಗಳಿಗೆ ಅಭಿನಂದಿಸಿದ್ದಾರೆ.

# ಸುಭಾಷ್ ಮೈದಾನ ಅಭಿವೃದ್ಧಿಗೆ ಡಿಪಿಆರ್ ರೂಪಿಸಿ



ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಸಕಲೇಶಪುರ: ಪಟ್ಟಣದ ಸುಭಾಷ್ ಮೈದಾನವನ್ನು ಅತ್ಯಾಧುನಿಕವಾಗಿ ಅಭಿವೃದ್ಧಿ ಪಡಿಸಲು ಕ್ರಿಯಾ ಯೋಜನೆ ರೂಪಿಸುವಂತೆ ಶಾಸಕ ಸಿಮೆಂಟ್ ಮಂಜು ಅಧಿಕಾರಿಗಳಿಗೆ ಸೂಚಿಸಿದ್ದಾರೆ.

ಮೈದಾನಕ್ಕೆ ಸೋಮವಾರ ಭೇಟಿ ನೀಡಿದ್ದ ಅವರು, ಮೈದಾನವನ್ನು ಎಷ್ಟು ಸ್ವಚ್ಛಗೊಳಿಸಿದರೂ ಮತ್ತೆ ಹುಲ್ಲು ಬೆಳೆದು ದುಸ್ಥಿತಿ ನಿರ್ಮಾಣವಾಗಿದೆ. ತಾಲ್ಲೂಕಿನ ಹವಾಮಾನ ಆರು ತಿಂಗಳು ಮಳೆ, ಆರು ತಿಂಗಳು ಬಿಸಿಲು ಇರುವುದರಿಂದ ಒಳಾಂಗಣ ಕ್ರೀಡಾಂಗಣ ನಿರ್ಮಾಣವಾದರೆ ಅನುಕೂಲವಾಗುತ್ತದೆ. ಈ ನಿಟ್ಟಿನಲ್ಲಿ ಅಧಿಕಾರಿಗಳನ್ನು ಕರೆದು ಅಂದಾಜು ಪಟ್ಟಿ ತಯಾರಿಸಿ ಸರ್ಕಾರಕ್ಕೆ ಪ್ರಸ್ತಾವನೆ ಕಳುಹಿಸಿ, ಅನುದಾನ ನೀಡುವಂತೆ ಮನವಿ ಮಾಡುತ್ತೇನೆ. ಸರ್ಕಾರ ಅನುದಾನ ನೀಡಿದರೆ ಶೀಘ್ರದಲ್ಲೇ ಒಳಾಂಗಣ ಕ್ರೀಡಾಂಗಣಗಳನ್ನು ನಿರ್ಮಿಸಿ ಯುವಕರಿಗೆ ಮಳೆಗಾಲದಲ್ಲಿಯೂ ದೈಹಿಕ ಅಭ್ಯಾಸ ಮಾಡಲು ಅನುಕೂಲ ಕಲ್ಪಿಸಬಹುದು ಎಂದು ಹೇಳಿದರು.

ಮೈದಾನದಲ್ಲಿ ಅಕ್ರಮವಾಗಿ ಕಸ ಹಾಕುತ್ತಿರುವುದರಿಂದ ಕ್ರೀಡಾಪಟುಗಳಿಗೆ ಸಮಸ್ಯೆಯಾಗುತ್ತಿದೆ. ಶೌಚಾಲಯ ಹಾಗೂ ವಿದ್ಯುತ್ ಸಂಪರ್ಕ ಸರಿಪಡಿಸುವಂತೆ ಅಧಿಕಾರಿಗಳಿಗೆ ತಿಳಿಸಿದ್ದೇನೆ. ಸ್ಥಳೀಯರು ಹಾಗೂ ಯುವಕರು ಸ್ವಚ್ಛತೆಗೆ ಆದ್ಯತೆ ನೀಡಿ ಸ್ವಚ್ಛತಾ ಅಭಿಯಾನದಂತೆ ಕೈಜೋಡಿಸಿದರೆ ಮೈದಾನವನ್ನು ಸುಸ್ಥಿತಿಯಲ್ಲಿ ಉಳಿಸಿಕೊಳ್ಳಬಹುದು ಎಂದು ಅಭಿಪ್ರಾಯಪಟ್ಟರು.

ನಿರ್ಮಿತಿ ಕೇಂದ್ರದ ಪ್ರಸನ್ನ ಹಾಗೂ ಇತರರಿದ್ದರು.

# ಖಾಲಿ ನಿವೇಶನದಲ್ಲಿ ಗಾಂಜಾ ಪೈರು

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಹಾಸನ: ನಗರದ ಕೆ.ಆರ್. ಪುರಂ 7ನೇ ಅಡ್ಡ ರಸ್ತೆಯ ಖಾಲಿ ನಿವೇಶನವೊಂದರಲ್ಲಿ ಗಾಂಜಾ ಗಿಡ ಬೆಳೆದಿರುವ ಪ್ರಕರಣ ಸೋಮವಾರ ಬೆಳಕಿಗೆ ಬಂದಿದೆ.




ನಿವೃತ್ತ ಶಿಕ್ಷಕ ಅಣ್ಣಯ್ಯ ಎಂಬುವರ ಖಾಲಿ ನಿವೇಶನದಲ್ಲಿ ಬೆಳೆದಿದ್ದ 1 ಕೆ.ಜಿ. ತೂಕದ 5 ಗಾಂಜಾ ಗಿಡಗಳನ್ನು ಅಬಕಾರಿ ಇಲಾಖೆ ಅಧಿಕಾರಿಗಳು ವಶಕ್ಕೆ ಪಡೆದಿದ್ದಾರೆ. ಬೆಂಗಳೂರಿನಲ್ಲಿ ವಾಸವಿರುವ ಅಣ್ಣಯ್ಯ ಅವರು ಆರು ತಿಂಗಳ ಹಿಂದೆ ತಮ ಖಾಲಿ ಜಾಗದಲ್ಲಿ ಬೆಳೆದಿದ್ದ ಗಿಡಗಂಟಿ ಸ್ವಚ್ಛಗೊಳಿಸಿದ್ದರು. ನಿರಂತರ ಮಳೆಯಿಂದ ಮತ್ತೆ ಪಾರ್ಥೇನಿಯಂ ಸೇರಿ ವಿವಿಧ ಗಿಡಗಂಟಿ ಬೆಳೆದಿತ್ತು. ಅದನ್ನೇ ಅವಕಾಶವಾಗಿ ಬಳಸಿಕೊಂಡ ವ್ಯಸನಿಗಳು ಅಲ್ಲಿ ಗಾಂಜಾ ಬೀಜ ಎಸೆದಿದ್ದರು. ಪಾರ್ಥೇನಿಯಂ ಗಿಡಗಳ ಜೊತೆಗೆ ಹಲುಸಾಗಿ ಬೆಳೆದಿದ್ದು ಯಾರಿಗೂ ಸಂಶಯ ಬಂದಿರಲಿಲ್ಲ. ಸೋಮವಾರ ವ್ಯಕ್ತಿಯೊಬ್ಬರ ಕಣ್ಣಿಗೆ ಗಾಂಜಾ ಗಿಡಗಳು ಕಂಡಿವೆ. ಅವರು ಮಹಾನಗರಪಾಲಿಕೆ ಪೌರಾಯುಕ್ತ ಆರ್. ಕೃಷ್ಣಮೂರ್ತಿ ಅವರಿಗೆ ಮಾಹಿತಿ ನೀಡಿದ್ದು ಪೌರ ಕಾರ್ಮಿಕರು ಪರಿಶೀಲಿಸಿ ಗಾಂಜಾ ಗಿಡ ಎಂಬುದನ್ನು ದೃಢಪಡಿಸಿದ್ದಾರೆ. ನಂತರ ಅಬಕಾರಿ ಉಪಾಧೀಕ್ಷಕ ಎಂ.ಹೆಚ್. ರಘು, ಸಿಬ್ಬಂದಿ ಪ್ರಮಿಳಾ ಮತ್ತಿತರರು ಸ್ಥಳಕ್ಕೆ ಬಂದು ಮಹಜರು ನಡೆಸಿ ಗಾಂಜಾ ಗಿಡಗಳನ್ನು ಕಿತ್ತು ರಾಸಾಯನಿಕ ಮಾದರಿ ಪರೀಕ್ಷೆಗೆ ಕಳುಹಿಸಿಕೊಟ್ಟರು.

# ಭಾರತ್ ಗ್ಯಾಸ್ ವಿತರಕರಿಂದ ಎಲ್‌ಪಿಜಿ ಪಂಚಾಯತ್




ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಹಾಸನ: ಮನೆಗಳಲ್ಲಿ ಅಡುಗೆ ಅನಿಲ ಉಪಯೋಗಿಸುವ ವಿಧಾನ, ಅಪಾಯ ಸಂಭವಿಸದಂತೆ ವಹಿಸಬೇಕಾದ ಮುನ್ನೆಚ್ಚರಿಕೆ ಕ್ರಮಗಳ ಕುರಿತು ಭಾರತ್ ಗ್ಯಾಸ್ ವಿತರಕರು ನಗರದ ಬಾಲಕಿಯರ ಸರ್ಕಾರಿ ಪದವಿ ಪೂರ್ವ ಕಾಲೇಜಿನಲ್ಲಿ ಎಲ್‌ಪಿಜಿ ಪಂಚಾಯತ್ ಅರಿವು ಕಾರ್ಯಕ್ರಮ ಹಮಿಕೊಂಡಿದ್ದರು.ಕಾರ್ಯಕ್ರಮದ ಅಂಗವಾಗಿ ವಿದ್ಯಾರ್ಥಿಗಳಿಗೆ ರಸಪ್ರಶ್ನೆ ಏರ್ಪಡಿಸಲಾಗಿತ್ತು. ಭಾರತ್ ಗ್ಯಾಸ್ ಹಿರಿಯ ಮಾರಾಟ ಅಧಿಕಾರಿ ಅನಂತರಾವ್ ಮಾತನಾಡಿ, ಸಿಲಿಂಡರ್ ಬಳಸುವಾಗ ಕುಟುಂಬಸ್ಥರು ಜಾಗರೂಕರಾಗಿರಬೇಕು. ಇಂದಿನ ವಿದ್ಯಾರ್ಥಿಗಳೇ ನಾಳೆಯ ಸಂಸಾರಿಗಳು. ಅವರಿಗೆ ಈಗಿನಿಂದಲೇ ಸರಿಯಾದ ಮಾರ್ಗದರ್ಶನ ನೀಡುವುದು ಅಗತ್ಯವೆಂದು ಹೇಳಿದರು.

# ಪ್ರಜಾಪ್ರಭುತ್ವ ರಕ್ಷಣೆಗೆ ಕಟಿಬದ್ಧರಾಗಿ

## ಆಲೂರಿನಲ್ಲಿ ಪ್ರಜಾಪ್ರಭುತ್ವ ದಿನ | ಶಾಲಾ ಮಕ್ಕಳಿಗೆ ವಿವಿಧ ಸ್ಪರ್ಧೆ



ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಆಲೂರು: ಯುವ ಜನರಲ್ಲಿ ಮತದಾನದ ಬಗ್ಗೆ ಜಾಗೃತಿ ಮೂಡಿಸುವ, ನಾಗರಿಕ ಪಾಲ್ಗೊಳ್ಳುವಿಕೆಯನ್ನು ಉತ್ತೇಜಿಸುವ ಹಾಗು ಸಂವಿಧಾನಿಕ ಮೌಲ್ಯಗಳನ್ನು ಬಲಪಡಿಸುವ ಉದ್ದೇಶದಿಂದ ರಾಷ್ಟ್ರೀಯ ಪ್ರಜಾಪ್ರಭುತ್ವ ದಿನದ ಅಂಗವಾಗಿ 'ನನ್ನ ಮತ–ನನ್ನ ಹಕ್ಕು' ಕಾರ್ಯಕ್ರಮವನ್ನು ರಾಜ್ಯಾದ್ಯಂತ ಹಕೊಳ್ಳಲಾಗಿದೆಯೆಂದು ತಹಶೀಲ್ದಾರ್ ಮಲ್ಲಿಕಾರ್ಜುನ್ ಹೇಳಿದರು.

ಪಟ್ಟಣದ ಸರ್ಕಾರಿ ಬಾಲಕಿಯರ ಪ್ರೌಢ ಶಾಲೆಯಲ್ಲಿ ಅಂತಾರಾಷ್ಟ್ರೀಯ ಪ್ರಜಾಪ್ರಭುತ್ವ ದಿನದ ಅಂಗವಾಗಿ ತಾಲ್ಲೂಕು ಆಡಳಿತ, ತಾಲ್ಲೂಕು ಪಂಚಾಯಿತಿ ಮತ್ತು ಸಮಾಜ ಕಲ್ಯಾಣ ಇಲಾಖೆಯಿಂದ ವಿದ್ಯಾರ್ಥಿಗಳಿಗೆ 'ನನ್ನ ಮತ–ನನ್ನ ಹಕ್ಕು' ವಿಷಯ ಕುರಿತು ಏರ್ಪಡಿಸಿದ್ದ ಭಾಷಣ ಸ್ಪರ್ಧೆ, ಚಿತ್ರಕಲೆ ಮತ್ತು ಪ್ರಬಂಧ ಸ್ಪರ್ಧೆ ಉದ್ಘಾಟಿಸಿ ಮಾತನಾಡಿದರು.

ಪ್ರಜಾಪ್ರಭುತ್ವದ ಮೌಲ್ಯಗಳ ಸೃಜನಶೀಲ ಅಭಿವ್ಯಕ್ತಿತ್ವವನ್ನು ಉತ್ತೇಜಿಸುವ ನಿಟ್ಟಿನಲ್ಲಿ ಸರ್ಕಾರವು ಶಿಕ್ಷಣ ಇಲಾಖೆಯ ನೇತೃತ್ವದಲ್ಲಿ ತಾಲ್ಲೂಕು, ಜಿಲ್ಲೆ ಮತ್ತು ರಾಜ್ಯ ಮಟ್ಟದಲ್ಲಿ ಶಾಲಾ ವಿದ್ಯಾರ್ಥಿಗಳಿಗೆ ಚಿತ್ರಕಲೆ ಸ್ಪರ್ಧೆ ಹಮಿಕೊಂಡಿದೆ. ವಿದ್ಯಾರ್ಥಿಗಳಿಗೆ ದೈನಂದಿನ ಜೀವನದಲ್ಲಿ ಪ್ರಜಾಪ್ರಭುತ್ವದ ಪಾತ್ರವನ್ನು ಚಿತ್ರಗಳ ಮೂಲಕ ಪ್ರದರ್ಶಿಸುವ ನಿಟ್ಟಿನಲ್ಲಿ ಉನ್ನತ ಶಿಕ್ಷಣ ಇಲಾಖೆಯು ಛಾಯಾಚಿತ್ರ ಸ್ಪರ್ಧೆ ಆಯೋಜಿಸುವ ಮೂಲಕ ನನ್ನ ಮತ, ನನ್ನ ಹಕ್ಕು, ಸಂವಿಧಾನದ ಪೀಠಿಕೆ ಮತ್ತು ಮಹಾತ ಗಾಂಧೀಜಿ ಅವರ ದೃಷ್ಟಿಕೋನ ದಲ್ಲಿ ಗಾಂಧಿ ಭಾರತ ಈ ಮೂರು ವಿಷಯಗಳು ಭಾಷಣ ವಿಷಯ ವಸ್ತುವಾಗಿದೆ ಎಂದು ತಿಳಿಸಿದರು.

ತಾ.ಪಂ.. ಮುಖ್ಯ ಕಾರ್ಯ ನಿರ್ವಹಣಾಧಿಕಾರಿ ಸುಬ್ರಹ್ಮಣ್ಯ ಶರ್ಮಾ ಮಾತನಾಡಿ, ರಾಜ್ಯ ಸರ್ಕಾರವು 'ನನ್ನ ಮತ–ನನ್ನ ಹಕ್ಕು' ಎಂಬ ಶೀರ್ಷಿಕೆಯಡಿ ಆಯೋಜಿಸಲು ನಿರ್ದೇಶಿಸಿರುವ ಈ ಕಾರ್ಯಕ್ರಮವು ಸಂವಿಧಾನ ನೀಡಿರುವ ಪ್ರಜಾಪ್ರಭುತ್ವ ಮಹತ್ವ ಅರಿಯಲು ಮತ್ತು ಮತದಾನ ಹಕ್ಕು, ಮೂಲಭೂತ ಕರ್ತವ್ಯಗಳ ಕುರಿತು ಯುವಪೀಳಿಗೆಗೆ ಜಾಗೃತಿ ಮೂಡಿಸುವುದಾಗಿದೆ ಎಂದು ಹೇಳಿದರು.

ಇದೇ ಸಂದರ್ಭದಲ್ಲಿ ಪ್ರಜಾಪ್ರಭುತ್ವದ ಕುರಿತು ಜಾಗೃತಿ ಮೂಡಿಸಲು ಶಾಲಾ ಕಾಲೇಜು ವಿದ್ಯಾರ್ಥಿಗಳಿಗೆ ಚರ್ಚಾಕೂಟ ಮತ್ತು ವಿಚಾರ ಸಂಕಿರಣ, ಪ್ರಜಾಪ್ರಭುತ್ವ ಕುರಿತಾದ ಚಿತ್ರಕಲೆ ಸ್ಪರ್ಧೆ ಆಯೋಜಿಸಲಾಗಿ–ತ್ತು. 8–10ನೇ ತರಗತಿ ವಿದ್ಯಾರ್ಥಿಗಳಿಗೆ ಚಿತ್ರಕಲಾ ಮತ್ತು ಪಿಯುಸಿಯಿಂದ ಪದವಿ ಕಾಲೇಜು ವಿದ್ಯಾರ್ಥಿಗಳಿಗೆ ಪ್ರಜಾಪ್ರಭುತ್ವ ಯಶಸ್ವಿಯಲ್ಲಿ ಮತದಾನದ ಪಾತ್ರ ಕು–ರಿತು ಚರ್ಚಾ ಸ್ಪರ್ಧೆ, ಭಾಷಣ ಸ್ಪರ್ಧೆ ಏರ್ಪಡಿಸಿ ವಿಜೇತ ವಿದ್ಯಾರ್ಥಿಗಳಿಗೆ ಬಹುಮಾನ ವಿತರಿಸಲಾಯಿತು.

ತಾಲ್ಲೂಕು ಸಮಾಜ ಕಲ್ಯಾಣಾಧಿಕಾರಿ ಕೌಸರ್ ಅಹಮದ್, ಪ್ರಭಾರ ಕ್ಷೇತ್ರ ಸಮನ್ವಯಾಧಿಕಾರಿ ವಿಜಯ ಕುಮಾರ್, ಸರ್ಕಾರಿ ಬಾಲಕಿಯರ ಪ್ರೌಢಶಾಲೆಯ ಮುಖ್ಯ ಶಿಕ್ಷಕಿ ಶಕುಂತಲಾ ಶೆಟ್ಟಿ, ಪ್ರಭಾರ ಸರ್ಕಾರಿ ನೂತನ ಹಿರಿಯ ಪ್ರಾಥಮಿಕ ಶಾಲೆಯ ಮುಖ್ಯ ಶಿಕ್ಷಕ ಭೂಪಾಲಯ್ಯ, ಸಮೂಹ ಸಂಪನ್ಮೂಲ ವ್ಯಕ್ತಿ ಜಯಂತಿ, ಚಿತ್ರಕಲಾ ಶಿಕ್ಷಕ ಬಿ.ಎಸ್. ದೇಸಾಯಿ ಇತರರಿದ್ದರು.

# ಸಮಾಜಕ್ಕೆ ವೈದ್ಯಕೀಯ ಕ್ಷೇತ್ರದ ಅವಶ್ಯಕತೆ ಹೆಚ್ಚಿದೆ

## ಬಾಹುಬಲಿ ಪ್ಯಾರಾ ಮೆಡಿಕಲ್ ಕಾಲೇಜು ಉದ್ಘಾಟನೆ | ಮಾಜಿ ಡಿಸಿಎಂ ಲಕ್ಷ್ಮಣ್ ಸವದಿ ಭಾಗಿ




ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಶ್ರವಣಬೆಳಗೊಳ: ಪ್ರಸ್ತುತ ಕಾಲಘಟ್ಟ ಅತ್ಯಂತ ಸೂಕ್ಷ್ಮವಾಗಿದ್ದು ವೈದ್ಯಕೀಯ ಕ್ಷೇತ್ರದ ಪ್ರಾಮುಖ್ಯತೆ ಹೆಚ್ಚಿದೆ. ಶ್ರವಣಬೆಳಗೊಳದಲ್ಲಿ ಪ್ಯಾರಾ ಮೆಡಿಕಲ್ ಸೈನ್ಸ್ ಕಾಲೇಜು ಆರಂಭಿಸಿರುವುದು ಉತ್ತಮ ಬೆಳವಣಿಗೆಯೆಂದು ಮಾಜಿ ಉಪ ಮುಖ್ಯಮಂತ್ರಿ ಲಕ್ಷ್ಮಣ್ ಸವದಿ ಹೇಳಿದರು.

ಪಟ್ಟಣದ ಗೊಮಟ ನಗರದಲ್ಲಿರುವ ಬಾಹುಬಲಿ ಶಿಕ್ಷಣ ಸಂಸ್ಥೆ ಆವರಣದಲ್ಲಿ ನೂತನವಾಗಿ ಪ್ರಾರಂಭವಾದ ಬಾಹುಬಲಿ ಪ್ಯಾರಾ ಮೆಡಿಕಲ್ ಸೈನ್ಸ್ ಕಾಲೇಜು ಉದ್ಘಾಟಿಸಿ ಮಾತನಾಡಿ, ಪ್ಯಾರಾ ಮೆಡಿಕಲ್ ಸೈನ್ಸ್ ಹಾಗೂ ನರ್ಸಿಂಗ್ ವ್ಯಾಸಂಗ ಮಾಡಿದ ವಿದ್ಯಾರ್ಥಿಗಳಿಗೆ ವೈದ್ಯಕೀಯ ಕ್ಷೇತ್ರದಲ್ಲಿ ಉತ್ತಮ ಭವಿಷ್ಯವಿದೆ ಎಂದು ತಿಳಿಸಿದರು.

ಸಾರ್ವಜನಿಕರು ಆರೋಗ್ಯಕ್ಕೆ ಆದ್ಯತೆ ನೀಡಬೇಕು. ಆಧುನಿಕತೆ ಬೆಳೆದಂತೆ ಆಹಾರ ಪದ್ಧತಿಯಲ್ಲಿ ಸಾಕಷ್ಟು ಬದಲಾವಣೆಗಳಾಗಿರುವುದರಿಂದ ರೋಗಪೀಡಿತ ಸಮಾಜ ನಿರ್ಮಾಣವಾಗಿದೆ. ಕೃಷಿಯಲ್ಲಿ ಅತಿಯಾದ ರಸಗೊಬ್ಬರ, ಕ್ರಿಮಿ ನಾಶಕಗಳನ್ನು ಬಳಸುತ್ತಿರುವುದರಿಂದ ಸೇವಿಸುವ ಆಹಾರ ವಿಷಪೂರಿತವಾಗಿದೆ ಎಂದರು.

ರಾಜ್ಯದಲ್ಲಿ ಕ್ಯಾನ್ಸರ್ ಖಾಯಿಲೆ ವ್ಯಾಪಕವಾಗಿ ಹರಡುತ್ತಿರುವುದಕ್ಕೆ ಆಹಾರ ಪದ್ಧತಿಯೇ ಬಹುಮುಖ್ಯ ಕಾರಣವಾಗಿದೆ. ಇದು ಹೀಗೆ ಮುಂದುವರೆದರೆ ತಾಲ್ಲೂಕಿಗೆ ಒಂದು ಕ್ಯಾನ್ಸರ್ ಆಸ್ಪತ್ರೆ ತೆರೆಯ ಬೇಕಾಗುತ್ತದೆಂದು ಆತಂಕ ವ್ಯಕ್ತಪಡಿಸಿದರು.

ಶ್ರವಣಬೆಳಗೊಳ ಮಠದ ಪರಂಪರೆ ಪುರಾತನವಾದುದು. ಸಾವಿರಾರು ವರ್ಷಗಳ ಇತಿಹಾಸ ಹೊಂದಿರುವ ಶ್ರೀ ಕ್ಷೇತ್ರದ ಅಭಿವೃದ್ಧಿಗೆ ಹಿಂದಿನ ಚಾರುಕೀರ್ತಿ ಶ್ರೀಗಳು ಅವಿರತ ಶ್ರಮಿಸಿದ್ದರು. ಧಾರ್ಮಿಕ, ಶೈಕ್ಷಣಿಕ, ಸಾಮಾಜಿಕವಾಗಿ ಶ್ರವಣಬೆಳಗೊಳದ ಕೀರ್ತಿಯನ್ನು ರಾಷ್ಟ್ರ ಮತ್ತು ಅಂತಾರಾಷ್ಟ್ರೀಯ ಮಟ್ಟದಲ್ಲಿ ಮುನ್ನೆಲೆಗೆ ತಂದಿದ್ದಾರೆ. ಅದೇ ಪರಂಪರೆಯನ್ನು ಇಂದಿನ ಪೀಠಾಧ್ಯಕ್ಷ ಅಭಿನವ ಚಾರುಶ್ರೀ ಮುಂದುವರಿಸುವಲ್ಲಿ ಆಧುನಿಕ ತಂತ್ರಜ್ಞಾನದ ಮೂಲಕ ಕಾರ್ಯೋನ್ಮುಖರಾಗಿದ್ದಾರೆ. ಶಿಕ್ಷಣ ಕ್ಷೇತ್ರದಲ್ಲಿ ಮಠಾಧೀಶರ ಸಾಧನೆ ಅನನ್ಯವಾಗಿದೆ. ಮಠ, ಮಾನ್ಯಗಳು ಶಿಕ್ಷಣ ಕ್ಷೇತ್ರಕ್ಕೆ ಕೊಡುಗೆ ನೀಡದಿದ್ದರೆ ಸರ್ಕಾರ ಸಂಪೂರ್ಣವಾಗಿ ಸಾಕ್ಷರತೆ ನೀಡಲು ಸಾಧ್ಯವಾಗುತ್ತಿರಲಿಲ್ಲ ಎಂದರು.

ಉತ್ತರ ಕರ್ನಾಟಕದಲ್ಲಿ ಸಿದ್ದು ನ್ಯಾಮಗೌಡ ಅವರ ನೇತೃತ್ವದಲ್ಲಿ ರೈತರಿಂದಲೇ ನಿರ್ಮಾಣಗೊಂಡ ಬ್ಯಾರೇಜ್ ಇಡೀ ದೇಶದಲ್ಲೇ ಮನ್ನಣೆ ಪಡೆದ ಮಾದರಿ ಬ್ಯಾರೇಜನ್ನು ಕರ್ಮಯೋಗಿ ಚಾರುಕೀರ್ತಿ ಶ್ರೀಗಳವರು ಅಡಿಗಲ್ಲು ಹಾಕಿ ಚಾಲನೆ ನೀಡಿದ್ದನ್ನು ಅವರು ಸ್ಮರಿಸಿದರು.

ಶಾಸಕ ಸಿ.ಎನ್. ಬಾಲಕೃಷ್ಣ ಮಾತನಾಡಿ, ಇಡೀ ದೇಶದಲ್ಲಿ ಸ್ವಾರ್ಥ ರಹಿತ ಧಾರ್ಮಿಕ ಕ್ಷೇತ್ರ ಇದ್ದರೆ ಅದು ತ್ಯಾಗ, ಅಹಿಂಸೆಯನ್ನು ಪ್ರಪಂಚಕ್ಕೆ ಸಾರಿದ ಭಗವಾನ್ ಬಾಹುಬಲಿ ಸ್ವಾಮಿಯ ಪುಣ್ಯಕ್ಷೇತ್ರ ಶ್ರವಣಬೆಳಗೊಳ. ಅಳಿವಿನಂಚಿನಲ್ಲಿದ್ದ ಪ್ರಾಕೃತ ಭಾಷೆಯನ್ನು ಪುನರುಜ್ಜೀವನಗೊಳಿಸಲು ಕರ್ಮಯೋಗಿ ಚಾರುಕೀರ್ತಿ ಭಟ್ಟಾರಕ ಸ್ವಾಮೀಜಿ ಐದು ದಶಕಗಳ ಕಾಲ ಶ್ರಮಿಸಿದರು. ಮಕ್ಕಳ ಆಸ್ಪತ್ರೆಯನ್ನು ತೆರೆದು ಗ್ರಾಮೀಣ ಭಾಗದ ಬಡ ಕುಟುಂಬಗಳಿಗೆ ಆಶಾಕಿರಣವಾದವರು.

ಒಂದನೇ ತರಗತಿಯಿಂದ ಎಂಜಿನಿಯರಿಂಗ್ ಪದವಿ ವರೆಗೆ ಶಿಕ್ಷಣ ಸಂಸ್ಥೆಗಳನ್ನು ತೆಗೆದು ಗ್ರಾಮೀಣ ಭಾಗದಲ್ಲೂ ಗುಣಮಟ್ಟದ ಶಿಕ್ಷಣ ನೀಡುವಲ್ಲಿ ಪ್ರಮುಖ ಪಾತ್ರ ವಹಿಸಿದರೆಂದರು.

ಹಿರಿಯ ಶ್ರೀಗಳು ಕ್ಷೇತ್ರದ ಅಭಿವೃದ್ಧಿಗೆ ಅಡಿಗಲ್ಲು ಹಾಕಿದ್ದರೆ, ಇಂದಿನ ಅಭಿನವ ಚಾರುಶ್ರೀ ಅದಕ್ಕೆ ಆಧುನಿಕ ಸ್ಪರ್ಶ ಸ್ಪರ್ಶ ನೀಡಿ ಉನ್ನತಿ–ಕರಣಗೊಳಿಸುತ್ತಿದ್ದಾರೆ. ಶ್ರವಣಬೆಳಗೊಳ ಕ್ಷೇತ್ರಕ್ಕೆ ಹಿಂದೆ ಸಚಿವರಾಗಿದ್ದ ಹೆಚ್.ಸಿ. ಶ್ರೀಕಂಠಯ್ಯ, ಮಾಜಿ ಪ್ರಧಾನಿ ಹೆಚ್.ಡಿ. ದೇವೇಗೌಡರು, ಹೆಚ್.ಡಿ. ರೇವಣ್ಣ ಅವರು ತಮದೇಯಾದ ಕೊಡುಗೆ ನೀಡಿದ್ದು, ಯುಜಿಡಿ, ನದಿಯಿಂದ ಕುಡಿಯುವ ನೀರಿನ ಸಂಪರ್ಕ, ವಸತಿ ಗೃಹ ನಿರ್ಮಾಣ ಸೇ–ರಿದಂತೆ ಮೂಲಭೂತ ಸೌಕರ್ಯಗಳನ್ನು ಕಲ್ಪಿಸಿದ್ದಾರೆ. ಅದೇ ದಾರಿಯಲ್ಲಿ ನಾವು ಕೂಡ ಶ್ರೀಗಳ ಮಾರ್ಗದರ್ಶನದಲ್ಲಿ ಕ್ಷೇತ್ರದ ಅಭಿವೃದ್ಧಿಗೆ ಶ್ರಮಿಸುತ್ತಿದ್ದೇವೆ ಎಂದರು.

ವಿಧಾನ ಪರಿಷತ್ ಮಾಜಿ ಸದಸ್ಯ ಎಂ.ಎ. ಗೋಪಾಲಸ್ವಾಮಿ ಮಾತನಾಡಿದರು. ಶ್ರವಣಬೆಳಗೊಳ ಗ್ರಾಮ ಪಂಚಾಯಿತಿ ಅಧ್ಯಕ್ಷ ಅಫ್ತಾಬ್ ಪಾಷಾ, ಪ್ಯಾರಾ ಮೆಡಿಕಲ್ ಬೋರ್ಡ್ ವಿಶೇಷ ಅಧಿಕಾರಿ ಡಾ. ಕೆ.ಆರ್. ವಿಜಯಕುಮಾರ್, ವೈದ್ಯಕೀಯ ಶಿಕ್ಷಣ ನಿರ್ದೇಶನಾಲಯ ನರ್ಸಿಂಗ್ ವಿಭಾಗದ ಸಹಾಯಕ ನಿರ್ದೇಶಕ ಶ್ರೀಕಾಂತ್ ಫುಲಾರೆ, ರಾಜ್ಯ ಶುಶ್ರೂಷ ಪರೀಕ್ಷಾ ಮಂಡಳಿ ಮೇಲ್ವಿಚಾರಕ ಎಂ.ಎಸ್. ಶರತ್ ಬಾಬು, ಬಾಹುಬಲಿ ಶಿಕ್ಷಣ ಸಂಸ್ಥೆ ಕಾರ್ಯಾಧ್ಯಕ್ಷ ಎ.ಸಿ. ಪಾಟೀಲ್, ಕಾರ್ಯದರ್ಶಿ ಬಬನ್ ಪಿ. ದತವಾಡೆ, ಆಡಳಿತ ವೈದ್ಯಾಧಿಕಾರಿಗಳಾದ ಡಾ. ಬಿ.ಆರ್. ಯುವರಾಜ್, ಡಾ. ಅರುಣ್ ಕುಮಾರ್, ಪ್ರಾಂಶುಪಾಲೆ ಡಾ. ಪೂರ್ಣಿಮಾ, ಪವಿತ್ರ ಮುಂತಾದವರಿದ್ದರು.

# ಸಾಮಾಜಿಕ–ಶೈಕ್ಷಣಿಕ ಸಮೀಕ್ಷೆ: ಎಲ್ಲಾ ಮನೆಗೂ ಸ್ಟಿಕ್ಕರ್ ಅಂಟಿಸಿ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಹಾಸನ: ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆಯಲ್ಲಿ ಜಿಲ್ಲೆಯ ಒಂದು ಕುಟುಂಬವು ಹೊರಗೆ ಉಳಿಯದಂತೆ ನಿಗಾ ವಹಿಸಿ ಪ್ರತಿಯೊಂದು ಮನೆಗೆ ಸ್ಟಿಕ್ಕರ್ ಅಂಟಿಸಲು ಕ್ರಮ ಕೈಗೊಳ್ಳಬೇಕೆಂದು ಜಿಲ್ಲಾಧಿಕಾರಿ ಕೆ.ಎಸ್. ಲತಾಕುಮಾರಿ ಅಧಿಕಾ–ರಿಗಳಿಗೆ ಸೂಚಿಸಿದ್ದಾರೆ.

ಭಾನುವಾರ ವಿಡಿಯೋ ಸಂವಾದದ ಮೂಲಕ ಅಧಿಕಾ–ರಿಗಳೊಂದಿಗೆ ಸಭೆ ನಡೆಸಿ ಮಾತನಾಡಿದ ಅವರು, 2025–26ನೇ ಸಾಲಿನಲ್ಲಿ ರಾಜ್ಯದ ಹಿಂದುಳಿದ ವರ್ಗಗಳ ಆಯೋಗದಿಂದ ಸಾಮಾಜಿ–ಕ ಮತ್ತು ಶೈಕ್ಷಣಿಕ ಸಮೀಕ್ಷೆಗೆ ಜಿಲ್ಲಾದ್ಯಂತ ವಿದ್ಯುತ್ ಸಂಪರ್ಕ ಪಡೆದ 5,53,343 ಮನೆಗಳಿಗೂ ಪ್ರಥಮ ಹಂತವಾಗಿ ಸೆಸ್ಕಾಂ ಸಿಬ್ಬಂದಿ ವಿದ್ಯುತ್ ಮೀಟ–ರ್ ರೀಡರ್‌ಗಳಿಂದ ಆರ್.ಆರ್.ನಂಬರ್ ಹೊಂದಿರುವ ಮನೆಗಳನ್ನು ಪಟ್ಟಿ ಮಾಡಿ ಮನೆಗಳಿಗೆ ಸ್ಟಿಕ್ಕರ್ ಅಂಟಿಸುವ ಜೊತೆಗೆ ಜಿಯೋ–ಟ್ಯಾಗಿಂಗ್ ಮಾಡುವ ಕಾರ್ಯ ಪ್ರಾರಂಭವಾಗಿದೆ. ನಿಗದಿತ ಅವಧಿಯೊಳಗೆ ಕೆಲಸ ಪೂರ್ಣ ಗೊಳಿಸಬೇಕೆಂದು ಸೂಚನೆ ನೀಡಿದರು.




ಆರ್.ಆರ್. ನಂಬರ್ ಹೊಂದಿಲ್ಲದೇ ಇರುವ (ವಿದ್ಯುತ್‌ಚ್ಛಕ್ತಿ ಸಂಪರ್ಕವಿಲ್ಲದಿರುವ) ಮನೆಗಳನ್ನು ಪಟ್ಟಿ ಮಾಡಿ, ಅಲೆಮಾರಿ, ಅರೆ ಅಲೆಮಾರಿ, ಗುಡಿಸಲು, ಶೆಡ್,ವಲಸೆ ಕಾರ್ಮಿಕರು ಟೆಂಟ್ ಹಾಕಿಕೊಂಡಿರುವುದನ್ನು ಗುರುತಿಸಿ ಪಟ್ಟಿ ಮಾಡಿ ಸ್ಟಿಕ್ಕರ್ ಅಂಟಿಸುವ ಜೊತೆಗೆ ಜಿಯೋ–ಟ್ಯಾಗಿಂಗ್ ಕಾರ್ಯವು ಆಗಬೇಕೆಂದರು.

ಮನೆಯ ಮುಖ್ಯ ದ್ವಾರದಲ್ಲಿ ಅಂಟಿಸಿರುವ ಸ್ಟಿಕ್ಕರ್‌ಗಳನ್ನು ಸಾರ್ವಜನಿಕರು ಗಣತಿ ಕಾರ್ಯ ಮುಗಿಯುವವರೆಗೂ ಗೀಚುವುದಾಗಲಿ, ಕಿತ್ತು ಹಾಕುವುದಾಗಲಿ ಮಾಡಬಾರದು. ಈ ಬಗ್ಗೆ ತಿಳಿವಳಿಕೆ ನೀಡಬೇಕು ಎಂದರು.ಶಾಲಾ ಮಕ್ಕಳ ಮೂಲಕ ಸಮೀಕ್ಷೆ ಬಗ್ಗೆ ಕುಟುಂಬಸ್ಥರಿಗೆ ಮಾಹಿತಿ ನೀಡಬೇಕು. ಗಣತಿದಾರರು ಮನೆಗೆ ಬಂದಾಗ ಮಾಹಿತಿ ನೀಡಲು ಎಲ್ಲಾ ಸಂಬಂಧಪಟ್ಟ ಎಲ್ಲಾ ದಾಖಲಾತಿಗಳೊಂದಿಗೆ ಸಿದ್ಧರಿರುವಂತೆ ಜನರಿಗೆ ಜಾಗೃತಿ ಮೂಡಿಸಲು ಕ್ರಮ ಕೈಗೊಳ್ಳುವಂತೆ ಸೂಚಿಸಿದರು.

ಸೆ. 22 ರಿಂದ ಅ. 7ರ ವರೆಗೆ ಗಣತಿದಾರರು ಮನೆ ಮನೆಗೆ ಭೇಟಿ ನೀಡಲಿದ್ದಾರೆ. ಯಾವುದೇ ಲೋಪವಾಗದಂತೆ ಅಧಿಕಾರಿಗಳು ಮುನ್ನೆಚ್ಚರಿಕೆ ವಹಿಸಬೇಕೆಂದು ತಿಳಿಸಿದರು. ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಜಿಲ್ಲಾ ಅಧಿಕಾರಿ ಕುಮಾರ್ ಹಾಗೂ ಇತರರಿದ್ದರು.

# ಗಂಡಸಿಯಲ್ಲಿ ಅದ್ಧೂರಿ ಗಣೇಶ ವಿಸರ್ಜನಾ ಮೆರವಣಿಗೆ



ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಅರಸೀಕೆರೆ: ತಾಲ್ಲೂಕಿನ ಗಂಡಸಿಯಲ್ಲಿ ಓಂ ಶ್ರೀ ಗಣಪತಿ ಉತ್ಸವ ಸಮಿತಿ ಹಾಗೂ ಚಾಲೆಂಜ್ ಬಾಯ್ಸ್‌ಗಂಡಸಿ ವತಿಯಿಂದ ಶ್ರೀ ದೊಡ್ಡಮ–ಚಿಕ್ಕಮದೇವಿ ದೇವಾಲಯದ ಬಳಿ ಪ್ರತಿಷ್ಠಾಪಿಸಿದ್ದ 18ನೇ ವರ್ಷದ ಗಣೇಶ ಮೂರ್ತಿ ವಿಸರ್ಜನಾ ಉತ್ಸವ ನಡೆಯಿತು.

ಉತ್ಸವದ ಪ್ರಯುಕ್ತ ಪ್ರತಿ ಬೀದಿಗಳಲ್ಲಿ ನಾರಿಮಣಿಯರು ರಂಗೋಲಿ ಚಿತ್ತಾರ ಬಿಡಿಸಿದ್ದರು. ಬಣ್ಣ ಬಣ್ಣದ ವಿದ್ಯುದೀಪಗಳ ಅಲಂಕಾರ ಆಕರ್ಷಕವಾಗಿತ್ತು. ಪ್ರಮುಖ ರಾಜ ಬೀದಿಗಳಲ್ಲಿ ಸಡಗರ ಸಂಭ್ರಮದಿಂದ ಅದ್ಧೂರಿಯಾಗಿ ಉತ್ಸವ ಮಾಡಿ ಭಾನುವಾರ ಬೆಳಿಗ್ಗೆ ಗಂಡಸಿ ದೊಡ್ಡಕೆರೆಯಲ್ಲಿ ಶ್ರೀ ಸ್ವಾಮಿ ಅವರನ್ನು ಸಕಲ ಬಿರುದಾವಳಿ ಮತ್ತು ವೇದ ಘೋಷಗಳ ಘೋಷಣೆಯೊಂದಿಗೆ ವಿಸರ್ಜಿಸಲಾಯಿತು. ರಾತ್ರಿ 10 ಗಂಟೆಗೆ ಪ್ರಾರಂಭವಾದ ಮೆರವಣಿಗೆಯಲ್ಲಿ ಯುವಕ ಯುವತಿಯರು ಹಿಂದೂ–ಮುಸ್ಲಿಂ ಎಂಬ ಭೇದ ಭಾವವಿಲ್ಲದೆ ಭಾವೈಕ್ಯತೆಯಿಂದ ಡಿ.ಜೆ. ಸೌಂಡಿಗೆ ಕುಣಿದು ಕುಪ್ಪಳಿಸಿದರು. ಡೊಳ್ಳು ಕುಣಿತ, ವೀರಭದ್ರನ ಕುಣಿತ, ವೀರಗಾಸೆ ನರ್ತನ, ಕರಡೆ ವಾದ್ಯ, ಚಂಡೆ ವಾದ್ಯ ಕೀಲುಕುದುರೆ ನರ್ತನ, ತಮಟೆ ವಾದ್ಯದ ಸದ್ದಿಗೆ ಯುವಕರು ಸಂಭ್ರಮದಿಂದ ಹೆಜ್ಜೆ ಹಾಕಿದರು. ಗಂಡಸಿ ಬಸವೇಶ್ವರ ವೃತ್ತದ ಬಳಿ ಅನ್ನದಾಸೋಹ ಏರ್ಪಡಿಸಲಾಗಿತ್ತು. ಶಾಸಕ ಕೆ. ಎಂ. ಶಿವಲಿಂಗೇಗೌಡ, ಸಂಸದ ಶ್ರೇಯಸ್ ಪಟೇಲ್ ಅವರು ಪಾಲ್ಗೊಂಡಿದ್ದರು.

# ಜಿಲ್ಲಾ ಮಟ್ಟದ ಕ್ರೀಡಾಕೂಟಕ್ಕೆ ಸಂತ ಜೋಸೆಫ್ ಶಾಲೆ ಮಕ್ಕಳು

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಸಕಲೇಶಪುರ: ಪಟ್ಟಣದ ಸುಭಾಷ್ ಮೈದಾನದಲ್ಲಿ ನಡೆದ ತಾಲ್ಲೂಕು ಮಟ್ಟದ ಕ್ರೀಡಾಕೂಟದಲ್ಲಿ ಸಂತ ಜೋಸೆಫ್ ಶಾಲೆಯ ವಿದ್ಯಾರ್ಥಿಗಳು ಅದ್ಭುತ ಪ್ರದರ್ಶನ ನೀಡಿ ಹಲವು ವಿಭಾಗಗಳಲ್ಲಿ ಪ್ರಶಸ್ತಿ ಪಡೆದು ಜಿಲ್ಲಾ ಮಟ್ಟಕ್ಕೆ ಆಯ್ಕೆಯಾಗಿದ್ದಾರೆ.

ವಿದ್ಯಾರ್ಥಿ ರುವಿನ್ ಎತ್ತರ ಜಿಗಿತದಲ್ಲಿ ಪ್ರಥಮ ಹಾಗೂ 100 ಮೀಟರ್ ಓಟದಲ್ಲಿ ದ್ವಿತೀಯ ಸ್ಥಾನ ಪಡೆದರೆ, ಸ್ನೇಹ 200



ಮೀ. ಓಟದಲ್ಲಿ ದ್ವಿತೀಯ ಮತ್ತು 100 ಮೀ. ಓಟದಲ್ಲಿ ತೃತೀಯ ಸ್ಥಾನ ಗಳಿಸಿದರು. ಗಿರೀಶ್ 400 ಮೀ. ಓಟದಲ್ಲಿ ಪ್ರಥಮ ಸ್ಥಾನ ಪಡೆದರೆ, ಮನ್ವಿತ್ 800 ಮೀ. ಓಟದಲ್ಲಿ ಪ್ರಥಮ ಸ್ಥಾನ ಪಡೆದರು. ಜಾನ್ಸನ್ ರೇಗೊ 200 ಮೀ. ಓಟದಲ್ಲಿ ದ್ವಿತೀಯ ಸ್ಥಾನ ಗಳಿಸಿದರು.

ಕ್ರಿಸ್ಟನ್ ಡಿಸಿಲ್ವಾ ಉದ್ದ ಜಿಗಿ–ತದಲ್ಲಿ ಪ್ರಥಮ ಸ್ಥಾನ ಪಡೆದು ಕೀರ್ತಿ ತಂದರೆ, ಜೀನಿಕ್ ಜಾವೆಲಿನ್ ತೂರಾಟ ಮತ್ತು ಹ್ಯಾಮರ್ ಥ್ರೋ ಎರಡರಲ್ಲೂ ಪ್ರಥಮ ಸ್ಥಾನ ಪಡೆದರು. ಅಮೋಘ ಕೂಡ ಜಾವೆಲಿನ್ ತೂರಾಟದಲ್ಲಿ ಪ್ರಥಮ ಹಾಗೂ ಹ್ಯಾಮರ್ ಥ್ರೋದಲ್ಲಿ ದ್ವಿತೀಯ ಸ್ಥಾನ ಪಡೆದರು.

ದೀಪ್ತಿ ಶಾಟ್‌ಪುಟ್‌ನಲ್ಲಿ ದ್ವಿತೀಯ ಸ್ಥಾನ ಪಡೆದರೆ, ಬಿಂದುಶ್ರೀ ಜಾವೆಲಿನ್ ತೂರಾಟದಲ್ಲಿ ತೃತೀಯ ಸ್ಥಾನ ಗಳಿಸಿದರು. ಜಯಲಕ್ಷ್ಮಿ 800 ಮೀಟರ್ ಓಟದಲ್ಲಿ ಪ್ರಥಮ ಸ್ಥಾನ ಪಡೆದರೆ, ಬೃಂದಾ ಎತ್ತರ ಜಿಗಿತದಲ್ಲಿ ದ್ವಿತೀಯ ಸ್ಥಾನ ಪಡೆದರು.

ತಂಡ ಸ್ಪರ್ಧೆಗಳಲ್ಲಿಯೂ ಸಂತ ಜೋಸೆಫ್ ವಿದ್ಯಾರ್ಥಿಗಳು ಮಿಂಚಿ, ಬಾಲಕಿಯರ ವಾಲಿಬಾಲ್‌ನಲ್ಲಿ ದ್ವಿತೀಯ ಮತ್ತು 4100 ಮೀ. ರಿಲೇಯಲ್ಲಿ ಪ್ರಥಮ ಸ್ಥಾನ ಪಡೆದು ಜಿಲ್ಲಾ ಮಟ್ಟಕ್ಕೆ ಆಯ್ಕೆಯಾಗಿದ್ದಾರೆ. ಶಾಲೆಯ ಸಂಚಾಲಕ ಸಿಸ್ಟರ್ ಐಡ, ಮುಖ್ಯಶಿಕ್ಷಕಿ ಸಿಸ್ಟರ್ ಆಶಾ, ದೈಹಿಕ ಶಿಕ್ಷಣ ಶಿಕ್ಷಕ ರಮೇಶ್ ವಿದ್ಯಾರ್ಥಿಗಳಿಗೆ ಅಭಿನಂದಿಸಿದ್ದಾರೆ.

## ಸರಪಂಚ್ ಸಂವಾದಕ್ಕೆ ಎಸ್.ಡಿ. ಸತೀಶ್ ಆಯ್ಕೆ



ಸಕಲೇಶಪುರ: ತಾಲ್ಲೂಕಿನ ಬಿರಡಹಳ್ಳಿ ಗ್ರಾ.ಪಂ.ಅಧ್ಯಕ್ಷ ಎಸ್.ಡಿ. ಸತೀಶ್ ಅವರು ಸೆ. 15 ರಂದು ದೆಹಲಿಯಲ್ಲಿ ನಡೆಯಲಿರುವ ಸರಪಂಚ್ ಸಂವಾದ ಕಾರ್ಯಕ್ರಮಕ್ಕೆ ಆಯ್ಕೆಯಾಗಿದ್ದಾರೆ.

ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ ವತಿಯಿಂದ ನಡೆಯುವ ಕಾರ್ಯಕ್ರಮಕ್ಕೆ ರಾಜ್ಯದ ಮೂರು ಪ್ರತಿನಿಧಿಗಳಲ್ಲಿ ಒಬ್ಬರಾಗಿ ಎಸ್.ಡಿ. ಸತೀಶ್ ಸರ್ಕಾರದ ವಿಶೇಷ ಅತಿಥಿಯಾಗಿ ಪಾಲ್ಗೊಳ್ಳಲಿದ್ದಾರೆ. ಈ ಹಿಂದೆ ಅವರು ರಾಷ್ಟ್ರೀಯ ಪಂಚಾಯತ್ ಪುರಸ್ಕಾರ ಪ್ರಶಸ್ತಿಯನ್ನು ಪ್ರಧಾನಿ ನರೇಂದ್ರ ಮೋದಿ ಅವರಿಂದ ಪಡೆದಿದ್ದರು. ಅವರ ಅಧ್ಯಕ್ಷತೆಯಲ್ಲಿ ಬಿರಡಹಳ್ಳಿ ಗ್ರಾ.ಪಂ.ಗೆ ಹಲವು ರಾಷ್ಟ್ರೀಯ ಮತ್ತು ರಾಜ್ಯ ಪ್ರಶಸ್ತಿಗಳು ಲಭಿಸಿವೆ.


# ಬಸವ ಅಭಿಯಾನ ಯಶಸ್ಸಿಗೆ ಮಠಾಧೀಶರ ಮನವಿ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಅರಕಲಗೂಡು: ವಿಶ್ವಕ್ಕೆ ಮಾನವತ್ವದ ಸಂದೇಶ ಸಾರಿದ ಜಗಜ್ಯೋತಿ ಬಸವೇಶ್ವರರ ಸಾಂಸ್ಕೃತಿಕ ಕಾರ್ಯಕ್ರಮಕ್ಕೆ ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಳ್ಳಬೇಕೆಂದು ದೊಡ್ಡ ಮಠದ ಶ್ರೀ ಮಲ್ಲಿಕಾರ್ಜುನ ಸ್ವಾಮೀಜಿ ಮನವಿ ಮಾಡಿದರು.

ಪಟ್ಟಣದ ದೊಡ್ಡ ಮಠದ ಆವರಣದಲ್ಲಿ ಆಯೋಜಿಸಿದ್ದ ವೀರಶೈವ ಸಮಾಜದ ಮಠಾಧೀಶರು ಹಾಗೂ ಮುಖಂಡರ ಸಭೆಯ ಸಾನಿಧ್ಯವಹಿಸಿ ಮಾತನಾಡಿ, ರಾಜ್ಯ ಸರ್ಕಾರ ವಿಶ್ವಗುರು ಜಗಜ್ಯೋತಿ ಬಸವೇಶ್ವರರನ್ನು ಸಾಂಸ್ಕೃತಿಕ ನಾಯಕ ಎಂದು ಘೋಷಿಸಿ ಒಂದು ವರ್ಷ ಪೂರೈಸಿದೆ.

ಈ ಘೋಷಣೆ ಇಡೀ ಮಾನವ ಕುಲಕ್ಕೂ ಹಾಗೂ ಸಮಾಜಕ್ಕೆ ಹೆಮ್ಮೆಯ ವಿಚಾರ. 12ನೇ ಶತಮಾನದಲ್ಲಿ



ಹಾಕಿಕೊಟ್ಟಂತಹ ಮಾದ–ರಿಯಲ್ಲೇ ಈಗಿನ ಸರ್ಕಾರಗಳು ಮುನ್ನಡೆಯಲು ಸಹಕಾ–ರಿಯಾಗಿದೆ.

ಅದನ್ನು ಹೆಚ್ಚು ಜನಪರವಾಗಿ ಪ್ರಯೋಜನಕಾ–ರಿಯಾಗಿ ಅನುಷ್ಠಾನಕ್ಕೆ ತಂದಾಗ ಸಮಾಜದಲ್ಲಿ ಹೆಚ್ಚಿನ ಸುಧಾರಣೆಯನ್ನು ಕಾಣಲು ಸಾಧ್ಯ. ಕಾಯಕ ತತ್ವದ ಬಸವಣ್ಣ ಅವರ ಆದರ್ಶಗಳನ್ನು ಮುಂದಿನ ಪೀಳಿಗೆಗೆ ಉಳಿಸಬೇಕು.

ಈ ನಿಟ್ಟಿನಲ್ಲಿ ಸೆ. 21ರಂದು ಹಾಸನದ ಹಾಸನಾಂಬ ಕಲಾಕ್ಷೇತ್ರದಲ್ಲಿ ಬಸವಣ್ಣನವರ ಸಾಂಸ್ಕೃತಿಕ ಅಭಿಯಾನ ನಡೆಯಲಿದೆ ಎಂದರು.

ಹಳೇಬೀಡು ಪುಷ್ಪಗಿರಿ ಮಠದ ಶ್ರೀ ಸೋಮಶೇಖರ ಸ್ವಾಮೀಜಿ ಮಾತನಾಡಿ, ಸೆ. 1ರಂದು ಪ್ರಾರಂಭವಾದ ಬಸವ ಜ್ಯೋತಿ ರಥಯಾತ್ರೆ 21ರಂದು ಚಿಕ್ಕಮಗಳೂರಿನಿಂದ ಹಾಸನಕ್ಕೆ ಬರುತ್ತಿದ್ದು ಜಿಲ್ಲಾಧಿಕಾರಿ ಕಚೇರಿಯಿಂದ ಹಾಸನಾಂಬ ಕಲಾಕ್ಷೇತ್ರದ ವರೆಗೆ ಮೆರವಣಿಗೆ ಸಾಗಲಿದೆ.

ನಂತರ ಪ್ರಮುಖ ಸ್ವಾಮೀ–ಜಿಗಳು ಹಾಗೂ ಬಸವಣ್ಣನವರ ಅಭಿಮಾನಿಗಳು ಸಭೆಯಲ್ಲಿ ಭಾಗವಹಿಸಲಿದ್ದಾರೆ. ಅರಕಲಗೂಡಿನಿಂದ ಹೆಚ್ಚಿನ ಸಂಖ್ಯೆಯಲ್ಲಿ ಭಕ್ತರು ಸೇರಿ ಕಾರ್ಯಕ್ರಮ ಯಶಸ್ವಿಗೊಳಿಸಬೇಕೆಂದು ತಿಳಿಸಿದರು.

ಚಿಲುಮೆ ಮಠದ ಜಯದೇವ ಸ್ವಾಮೀಜಿ, ತೇಜೂರು ಮಠದ ಕಲ್ಯಾಣ ಸ್ವಾಮೀಜಿ, ತಣ್ಣೀರುಹಳ್ಳ ಮಠದ ವಿಜಯಕುಮಾರ ಸ್ವಾಮೀಜಿ, ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾ ಜಿಲ್ಲಾ ಘಟಕದ ಅಧ್ಯಕ್ಷ ನವಿಲೆ ಪರಮೇಶ್, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಎನ್. ರವಿಕುಮಾರ್, ಯುವ ಘಟಕದ ಅಧ್ಯಕ್ಷ ಚಂದ್ರಶೇಖರ್, ಪಪಂ ಮಾಜಿ ಅಧ್ಯಕ್ಷ ಲೋಕೇಶ್, ಮುಖಂಡರಾದ ಶಿವಣ್ಣ, ಪಂಚಾಕ್ಷರಿ, ವಿರೂಪಾಕ್ಷ, ಈರೇಗೌಡ, ಜಗದೀಶ, ಸುಂದ್ರೇಶ್, ವೇದಮೂರ್ತಿ, ಹೊಂಡರವಳ್ಳಿ ಲೋಕೇಶ್, ವಿಜಕುಮಾರ್, ಕಿರಣ್ ಕಮಲಮ, ಸವಿತಾ, ನಿರ್ವಾಣಪ್ಪ ಇತರರು ಇದ್ದರು.

# ಬೈಕ್ ಅಪಘಾತ: ಸವಾರ ಸಾವು

ಚನ್ನರಾಯಪಟ್ಟಣ: ರಸ್ತೆಗೆ ಅಡ್ಡಲಾಗಿ ಬಂದ ನಾಯಿಗೆ ಡಿಕ್ಕಿಯಾಗುವುದನ್ನು ತಪ್ಪಿಸಲು ಜೋರಾಗಿ ಬ್ರೇಕ್ ಹಾಕಿದ ಬೈಕ್ ಸವಾರ ಕೆಳಗೆ ಬಿದ್ದು ಮೃತಪಟ್ಟಿರುವ ಘಟನೆ ತಾಲ್ಲೂಕಿನ ಹಿರೀಸಾವೆಯ ಅಮ ಕುಟೀರ ಹೋಟೆಲ್ ಸಮೀಪ ನಡೆದಿದೆ.

ನಾಗಮಂಗಲ ತಾಲ್ಲೂಕು ಎಂ. ಕೋಡಿಹಳ್ಳಿ ಗ್ರಾಮದ ಹನುಮಂತೇಗೌಡ (46) ಮೃತರು. ಸಂಬಂಧಿ ಶಾಂತ ಕುಮಾರ ಅವರೊಂದಿಗೆ ಬೈಕ್‌ನಲ್ಲಿ ತೆರಳುತ್ತಿದ್ದಾಗ ಏಕಾಏಕಿ ನಾಯಿ ಅಡ್ಡ ಬಂದಿದೆ. ಜೋರಾಗಿ ಬ್ರೇಕ್ ಹಾಕಿದ ಪರಿಣಾಮ ಇಬ್ಬರೂ ಕೆಳಗೆ ಬಿದ್ದಿದ್ದಾರೆ. ಗಂಭೀರ ಗಾಯಗೊಂಡಿದ್ದ ಅವರನ್ನು ಸ್ಥಳೀಯ ಆಸ್ಪತ್ರೆಗೆ ದಾಖಲಿಸಲಾಗಿ–ತ್ತು. ತೀವ್ರ ರಕ್ತಸ್ರಾವ ಹಾಗೂ ಗಾಯದಿಂದಾಗಿ ಹನುಮಂತೇಗೌಡ ಮೃತಪಟ್ಟಿದ್ದಾರೆ. ಶಾಂತಕುಮಾರ ಅವರಿಗೆ ಚಿಕಿತ್ಸೆ ಮುಂದುವರೆದಿದೆ. ಹಿರೀಸಾವೆ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ಇತಿಹಾಸದಲ್ಲಿ ಈ ದಿನ

## ಸೆಪ್ಟೆಂಬರ್ 16

1620 – ಇಂಗ್ಲೆಂಡಿನಿಂದ **Mayflower** ಹಡಗು ಅಮೆರಿಕಕ್ಕೆ ತೆರಳಿತು.

1810 – ಮೆಕ್ಸಿಕೋದಲ್ಲಿ ಸ್ಪೇನ್ ಅಧೀನತೆಗೆ ವಿಲಕ್ಷಣ ವಿರೋಧದ **början:** ಮಿಗೆಲ್ ಹಿಡಾಲ್ಗೊ **"Grito de Dolores"** ಪ್ರಕಟಿಸಿದನು.

1893 – ಓಕ್ಲಹೋಮಾ ಚೆರೋಕಿ ಸ್ಟ್ರಿಪ್ ಭೂಮಿಯನ್ನು ಹಕ್ಕುಪತ್ರ ಪಡೆದಿರುವವರು ಒಟ್ಟಿಗೆ ಭರ್ತಿಯಾಗಲು "ಲ್ಯಾನ್ ರನ್" ಆರಂಭವಾಯಿತು; ಇದೊಂದು ಅತ್ಯಂತ ದೊಡ್ಡ ಭೂಮಿಯ ಹಂಚಿಕೆ ಘಟನೆ.

1908 – ಜನರಲ್ ಮೋಟರ್ಸ್ ಸಂಸ್ಥೆ ಸ್ಥಾಪನೆಯಾಯಿತು.

1959 – **Xerox** 914, ಪ್ರಥಮ **"plain paper copier"** (ಸರಳ ಕಾಗದ ಪ್ರತಿ ಯಂತ್ರ) ಸಾರ್ವಜನಿಕರಿಗೆ ಪರಿಚಯವಾಯಿತು.

1963 – ಮಲೇಶಿಯಾ ರಾಷ್ಟ್ರ ರೂಪುಗೊಂಡಿತು: **Federation of Malaya, Sabah, Sarawak** ಮತ್ತು ಖುಟಿಂಚಿರಿಂಡಿಜ ಸೇರಿಕೊಳ್ಳುವ ಮೂಲಕ.

1978 – ಇನ್‌ರಾನ್‌ನ **Tabas**ʃ ಪಟ್ಟಣದಲ್ಲಿ ಭೀಕರ ಭೂಕಂಪ: ಸುಮಾರು 15,000 ಮಂದಿ ಮೃತಪಟ್ಟರು.

ಜನನ

**Gautam Rajadhyaksha —** ಫ್ಯಾಷನ್ ಛಾಯಾಗ್ರಾಹಕ; ಜನನ: 16 ಸೆಪ್ಟೆಂಬರ್ 1950

**Comedian Peter (Pedro Menino da Costa)** – ಗೋವಾದ **Tiatr**/ಹಾಸ್ಯ ಕಲಾವಿದ; ಜನನ: 16 ಸೆಪ್ಟೆಂಬರ್ 1957

ಮರಣ (ಹತ್ಯೆ / ಹಿಂಸಾತ್ಮಕ)

**Tarakeswar Sengupta —** ಸ್ವಾತಂತ್ರ್ಯ ಹೋರಾಟಗಾರ; ಮರಣ: 16 ಸೆಪ್ಟೆಂಬರ್ 1931, **Hijli Detention Camp,** ಪೊಲೀಸರ ಗುಂಡಿನಿಂದ

**Santosh Kumar Mitra —** ಭಾರತೀಯ ಸ್ವಾತಂತ್ರ್ಯ ಹೋರಾಟಗಾರ; ಮರಣ: 16 ಸೆಪ್ಟೆಂಬರ್ 1931, **Hijli Detention Camp**

Printed, Published and Owned by Manjunatha B.R. and Printed at PAPPAS PRINT HOUSE, BEHIND DISTRICT STADIUM, M.G.ROAD,VIDYANAGAR, HASSAN, KARNATAKA-573201 and published at No. 150, BANAVASE, SAKALESHPURA TALLUK, HASSAN DISTRICT, KARNATAKA-573201. Editor: MANJU BANAVASE. Ph: 8762954248